ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.
URL.www.anekal-pa.in, web5.kar.nic.in/e-vinyasa

## ಪ್ರಾರಂಭಿಕ ಪ್ರಮಾಣ ಪತ್ರ

ಸಂಖ್ಯೆ: ಆಯೋಪ್ರಾ/ಸಿಸಿ/191/2017-18 ದಿನಾಂಕ: 10 AUG 2018

**ಮೆ:ಎಕ್ಸ್‌ಪರ್ಟ್ ರಿಯಲ್ಟರ್ಸ್ ಪ್ರೈವೇಟ್ ಲಿಮಿಟೆಡ್** ಪರವಾಗಿ ನಿರ್ದೇಶಕರಾದ ಶ್ರೀ ಬಿ.ಆರ್.ರವೀಂದ್ರ, ಇವರು ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಬುಕ್ಕಸಾಗರ ಗ್ರಾಮದ ಸ.ನಂ.165/1 ಹಾಗೂ ಇತರೆ ಸ.ನಂ.ಗಳಲ್ಲಿ ಅನುಮೋದನೆಯಾಗಿರುವ ವಸತಿ ವಿನ್ಯಾಸ ನಕ್ಷೆಯಲ್ಲಿನ ಒಗ್ಗೂಡಿಸಿದ ನಿವೇಶನ ಸಂಖ್ಯೆ:6, 6A ಇಂದ 6S ವರೆಗಿನ ಖಾತಾ ಸಂ.375/375/6,6ಎ ಇಂದ 6ಎಸ್‌ರಲ್ಲಿ 5492.61ಚ.ಮೀ. ನಿವೇಶನ ವಿಸ್ತೀರ್ಣದಲ್ಲಿ ಸ್ಟಿಲ್ಟ್ + ನೆಲ ಮತ್ತು ಮೇಲಿನ ಮೂರು **ಅಂತಸ್ತುಗಳ ಒಟ್ಟು 13192.69ಚ.ಮೀ. ಕಟ್ಟಡದಲ್ಲಿ 128ಘಟಕಗಳ ವಸತಿ ಸಮುಚ್ಛಯ** ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಅನುಮೋದನಾ ಶುಲ್ಕ **ರೂ.73,000/- ಡಿ.ಡಿ.ನಂ.677035 ರಸೀದಿ ನಂ.1782020** ಹಾಗೂ ಭದ್ರತಾ ಠೇವಣಿ ಶುಲ್ಕ **ರೂ.6,60,000/- ಡಿ.ಡಿ. ನಂ.677034 ರಸೀದಿ ನಂ.1782021 ದಿನಾಂಕ:04-08-2018ರಂದು** ಪಾವತಿಸಲಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(1)ರನ್ವಯ ಈ ಕೆಳಕಂಡ ಷರತ್ತುಗೊಳಪಡಿಸಿ ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ.

### ಷರತ್ತುಗಳು

1) ಮೇಲ್ಕಂಡ ಪ್ರದೇಶದಲ್ಲಿ ನಿರ್ಮಿಸುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಸಮುಚ್ಛಯ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು, ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ಕಟ್ಟಡ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿರುತ್ತದೆ.
3) ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ ಹಾಗೂ ಕಾರ್ಮಿಕರ ಕಲ್ಯಾಣ ನಿಧಿಗೆ ಪಾವತಿಸಬೇಕಾದ ಶುಲ್ಕವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ಪರವಾನಿಗೆ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಪಾವತಿಸತಕ್ಕದ್ದು.
4) ಕಟ್ಟಡ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ, ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
5) ಈ ಪ್ರಾರಂಭಿಕ ಪ್ರಮಾಣ ಪತ್ರವು **ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ.** ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
6) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.
7) ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
8) ವಿನ್ಯಾಸದಾರರು ಕಟ್ಟಡ ನಿರ್ಮಾಣದ ಸುತ್ತ ತಡೆಗೋಡೆ ನಿರ್ಮಿಸಿ ಧೂಳು, ಕಟ್ಟಡ ಸಾಮಾಗ್ರಿಗಳಿಂದ ಅಕ್ಕಪಕ್ಕದ ಜನರಿಗೆ ಮತ್ತು ಕಟ್ಟಡಗಳಿಗೆ ತೊಂದರೆಯಾಗದಂತೆ ನಿರ್ವಹಿಸತಕ್ಕದ್ದು.
9) ತಾತ್ಕಾಲಿಕ ಶೌಚಾಲಯಗಳನ್ನು ಕಾರ್ಮಿಕರ ಅನುಕೂಲಕ್ಕಾಗಿ ನಿರ್ಮಿಸಿ ನಂತರ ನಿರ್ಮೂಲಗೊಳಿಸತಕ್ಕದ್ದು.

ಪು.ತಿ.ನೋ...

10)ಒಣಕಸ / ಹಸಿಕಸವನ್ನು ಪ್ರತ್ಯೇಕವಾಗಿ ಬೇರ್ಪಡಿಸಿ ಗೊಬ್ಬರವಾಗಿ ಮಾರ್ಪಡಿಸಲು ಸೂಕ್ತ ಕ್ರಮಕೈಗೊಳ್ಳತಕ್ಕದ್ದು.

11)ವಾಹನ ನಿಲುಗಡೆ ಪ್ರದೇಶವನ್ನು ಅದೇ ಉದ್ದೇಶಕ್ಕೆ ಉಪಯೋಗಿಸತಕ್ಕದ್ದು.

12)ಕಟ್ಟಡ ನಿರ್ಮಾಣ ಸಾಮಾಗ್ರಿಗಳನ್ನು ರಸ್ತೆಯಲ್ಲಿ/ಚರಂಡಿ ಮೇಲೆ ಅಥವಾ ಯಾವುದೇ ಸಾರ್ವಜನಿಕ ಪ್ರದೇಶದಲ್ಲಿ ಶೇಖರಣೆ ಮಾಡಬಾರದು, ಈ ಬಗ್ಗೆ ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.

13)ಪ್ರಸ್ತಾವಿತ ಪ್ರದೇಶದ ಸುತ್ತಲೂ ಬರುವ ನಡುಜಾಗಗಳಲ್ಲಿ ಕಡ್ಡಾಯವಾಗಿ ಮರಗಳನ್ನು ಬೆಳೆಸತಕ್ಕದ್ದು.

14)ನಿವೇಶನದ ಆವರಣದೊಳಗೆ ಮಳೆ ನೀರಿನ ಕೊಯ್ಲು ಅನ್ನು ಅಳವಡಿಸಿ ಸೂಕ್ತವಾಗಿ ನಿರ್ವಹಿಸತಕ್ಕದ್ದು.

15)ಸೋಲಾರ್ ವಾಟರ್ ಹಿಟರ್ / ಸೋಲಾರ್ ಲೈಟ್‌ಗಳನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

16)ಪ್ರಸ್ತಾವಿತ ನಿವೇಶನವು ಯಾವುದೇ ಭೂ ಸ್ವಾದೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಬ್ದಾರಿಯಾರುವುದಿಲ್ಲ.

17)ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.

18)ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪತ್ರ ಸಂಖ್ಯೆ:PCB/776/CNP/17/H - 195, ದಿನಾಂಕ:21-05-2018ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

19)ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮುನ್ನ ಕಲ್ಲುಬಾಳು ಗ್ರಾಮ ಪಂಚಾಯಿತಿಯಿಂದ ಕಟ್ಟಡ ಪರವಾನಿಗೆಯನ್ನು ಪಡೆಯತಕ್ಕದ್ದು.

20) ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ, ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರುವ, ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ/ದಾಖಲೆಗಳು, ತಪ್ಪಾಗಿದ್ದಲ್ಲಿ/ಪೋರ್ಜರಿ ಆಗಿದ್ದಲ್ಲಿ/ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಕಟ್ಟಡ ನಕ್ಷೆ ಅನುಮೋದನೆಯು ಸ್ವಯಂಚಾಲಿತವಾಗಿ ರದ್ದಾಗುವ ನಿಬಂಧನೆಗೊಳ್ಳಪಟ್ಟಿರುತ್ತದೆ.

21)ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಯಾವ ಪೂರ್ವ ಸೂಚನೆಯೂ ಇಲ್ಲದೇ ತಂತಾನೆ ರದ್ದಾಗುತ್ತದೆ.

22) ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿದೆ;.

| **ನಡುಜಾಗ** | **ವಲಯ ನಿಯಮಾವಳಿಯಂತೆ** | **ನಕ್ಷೆಯಂತೆ** |
|---|---|---|
| ಮುಂಭಾಗ | ಸುತ್ತಲೂ 5.00ಮೀ. | ಸುತ್ತಲೂ 5.00ಮೀ. ಮತ್ತು ಅದಕ್ಕಿಂತ ಹೆಚ್ಚು |
| ಹಿಂಭಾಗ | | |
| ಎಡಭಾಗ | | |
| ಬಲಭಾಗ | | |

ಪು.ತಿ.ನೋ...

| | | |
|---|---|---|
| ನೆಲ ವಿಸ್ತೀರ್ಣ ಪ್ರಮಾಣ | 1.75 | 1.59 |
| ಕಟ್ಟಡದ ಅಂತಸ್ತುಗಳು | - | ಸ್ಟಿಲ್ಟ್ + ನೆಲ ಮತ್ತು ಮೇಲಿನ ಮೂರು ಅಂತಸ್ತುಗಳು ಮಾತ್ರ |
| ವಾಹನ ನಿಲುಗಡೆ | 124No's | 125No's |
| ಕಟ್ಟಡದ ಎತ್ತರ | 15.00ಮೀ. | 14.90ಮೀ. |

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

ಸಹಿ/-

**ಸದಸ್ಯ- ಕಾರ್ಯದರ್ಶಿ ಹಾಗೂ ನಗರ ಮತ್ತು**
**ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,**
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

**ಪ್ರತಿಯನ್ನು:**

1) **ಮೆ:ಎಕ್ಸ್‌ಪರ್ಟ್ ರಿಯಲ್ಟರ್ಸ್ ಪ್ರೈವೇಟ್ ಲಿಮಿಟೆಡ್** ಪರವಾಗಿ ನಿರ್ದೇಶಕರಾದ ಶ್ರೀ ಬಿ.ಆರ್.ರವೀಂದ್ರ, ಜಿ-2, ಪ್ರೈಡ್ ಎಲೈಟ್, ನಂ.10, ಮ್ಯೂಸಿಯಂ ರಸ್ತೆ, ಬೆಂಗಳೂರು - 560 001 ಇವರಿಗೆ ಮುಂದಿನ ಕ್ರಮಕ್ಕಾಗಿ ನೀಡಲಾಗಿದೆ.
2) **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು,** ಕಲ್ಲುಬಾಳು ಗ್ರಾಮ ಪಂಚಾಯಿತಿ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ಇವರಿಗೆ ಕಟ್ಟಡ ನಕ್ಷೆಯ ಪ್ರತಿಗಳೊಂದಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
3) ಕಛೇರಿ ಪ್ರತಿ.

10/08/18

**ಸದಸ್ಯ- ಕಾರ್ಯದರ್ಶಿ ಹಾಗೂ ನಗರ ಮತ್ತು**
**ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,**
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

10/08